ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಚುನಾವಣೆ (ಬಿಬಿಎಂಪಿ)

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ ದಿನಾಂಕ : DATE 23/1/2020

# ಇಂದು ಸ್ಥಾಯಿ ಸಮಿತಿ ಅಧ್ಯಕ್ಷರ ಚುನಾವಣೆ

**ಬೆಂಗಳೂರು:** ಪಾಲಿಕೆಯ 12 ಸ್ಥಾಯಿ ಸಮಿತಿಗಳ ಅಧ್ಯಕ್ಷರ ಆಯ್ಕೆ ಚುನಾವಣೆ ಗುರುವಾರ (ಜ.23) ನಿಗದಿಯಾಗಿದೆ. ಮೇಯರ್ ಗೌತಮ್‌ಕುಮಾರ್ ಅಧ್ಯಕ್ಷತೆಯಲ್ಲಿ ಕೇಂದ್ರ ಕಚೇರಿಯ ಕೆಂಪೇಗೌಡ ಸಭಾಂಗಣದಲ್ಲಿ ಬೆಳಗ್ಗೆ 9ಕ್ಕೆ ಚುನಾವಣೆ ನಡೆಯಲಿದೆ.

ಜ.18ರಂದು 12 ಸ್ಥಾಯಿ ಸಮಿತಿಗಳಿಗೆ ಸದಸ್ಯರನ್ನು ಅವಿರೋಧವಾಗಿ ಆಯ್ಕೆ ಮಾಡಲಾಗಿತ್ತು. ಆದರೆ, ಸಮಿತಿಗಳಿಗೆ ಅಧ್ಯಕ್ಷರನ್ನು ಆಯ್ಕೆ ಮಾಡುವ ಪ್ರಕ್ರಿಯೆ ಬಾಕಿ ಉಳಿದಿತ್ತು. ಈಗಾಗಲೆ ಆಯ್ಕೆಯಾಗಿರುವ ಸ್ಥಾಯಿ ಸಮಿತಿ ಸದಸ್ಯರ ಪೈಕಿ ಒಬ್ಬರನ್ನು ಅಧ್ಯಕ್ಷರಾಗಿ ಆಯ್ಕೆ ಮಾಡಲಾಗುತ್ತದೆ.

**» ಎಲೆಕ್ಷನ್ ಮುಂದೂಡಲು ಪ್ರತಿಪಕ್ಷ ನಾಯಕರ ಒತ್ತಾಯ**

**ಚುನಾವಣೆ ಮುಂದೂಡಬೇಕು:** ಕರ್ನಾಟಕ ಪೌರ ನಿಗಮ ನಿಯಮದ ಅನ್ವಯ ಸ್ಥಾಯಿ ಸಮಿತಿ ಅಧ್ಯಕ್ಷರ ಚುನಾವಣೆ ನಡೆಸುವ 7 ದಿನ ಮೊದಲು ಸದಸ್ಯರಿಗೆ ಸೂಚನಾಪತ್ರ ನೀಡಬೇಕು. ಆದರೆ ಸದಸ್ಯರಿಗೆ ಯಾವುದೇ ಸೂಚನೆ ನೀಡದೆ ಗುರುವಾರ ಚುನಾವಣೆ ನಡೆಸುವುದಾಗಿ ನೋಟಿಸ್ ನೀಡಲಾಗಿದೆ. ನೋಟಿಸ್ ಹಿಂಪಡೆದು ಚುನಾವಣೆ ಮುಂದೂಡಬೇಕು. ಇಲ್ಲವಾದಲ್ಲಿ ಕಾನೂನು ಹೋರಾಟ ಮಾಡಲಾಗುವುದು ಎಂದು ಆಯುಕ್ತ ಅನಿಲ್‌ಕುಮಾರ್‌ಗೆ ಸಲ್ಲಿಸಿರುವ ಪತ್ರದಲ್ಲಿ ಪಾಲಿಕೆ ವಿರೋಧ ಪಕ್ಷದ ನಾಯಕ ಅಬ್ದುಲ್ ವಾಜಿದ್ ಎಚ್ಚರಿಸಿದ್ದಾರೆ.